**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ**
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು–560 027. ಭಾರತ
ದೂರವಾಣಿ : 080-22221321 / 22221325
ವೆಬ್–ಸೈಟ್ : www.ksrtc.in

**Karnataka State Road Transport Corporation**
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.in

**ಸಂ.ಕರಾಸ:ಕೇಕ:ಆಡಳಿತ:ಸೇನಿ:190:2021–22** **ದಿನಾಂಕ:27–01–2022**

# ಸುತ್ತೋಲೆ ಸಂಖ್ಯೆ:1699

**ವಿಷಯ:** ಮೈಸೂರು ನಗರ ಸಾರಿಗೆ ವಿಭಾಗ ಮತ್ತು ಮೈಸೂರು ಗ್ರಾಮಾಂತರ ವಿಭಾಗಗಳನ್ನು ವಿಲೀನಗೊಳಿಸುವ ಬಗ್ಗೆ.

**ಉಲ್ಲೇಖ:** ಮಂಡಳಿ ಠರಾವು ಸಂಖ್ಯೆ:10265, ದಿನಾಂಕ:28.12.2021

– – – –

ಮೈಸೂರು ನಗರ ಸಾರಿಗೆ ವಿಭಾಗ ಮತ್ತು ಮೈಸೂರು ಗ್ರಾಮಾಂತರ ವಿಭಾಗಗಳನ್ನು ವಿಲೀನಗೊಳಿಸಲು ನಿಗಮದ ನಿರ್ದೇಶಕ ಮಂಡಳಿಯು ಠರಾವು ಸಂಖ್ಯೆ:10265, ದಿನಾಂಕ:28.12.2021 ರನ್ವಯ ನಿರ್ಣಯಿಸಿರುತ್ತದೆ. ಅದರಂತೆ, ಈ ಕೆಳಕಂಡಂತೆ ಕ್ರಮ ಕೈಗೊಳ್ಳಲು ಆದೇಶಿಸಲಾಗಿದೆ.

1. ಮೈಸೂರು ನಗರ ಸಾರಿಗೆ ವಿಭಾಗ ಹಾಗೂ ಮೈಸೂರು ಗ್ರಾಮಾಂತರ ವಿಭಾಗಗಳನ್ನು ವಿಲೀನಗೊಳಿಸಿ, "ಮೈಸೂರು ವಿಭಾಗ" ಎಂದು ಮರುನಾಮಕರಣಗೊಳಿಸಲಾಗಿದೆ. ಸದರಿ ವಿಭಾಗವನ್ನು ದಿನಾಂಕ:01.03.2022ರಿಂದ ಜಾರಿಗೆ ಬರುವಂತೆ ಪೂರ್ಣ ಪ್ರಮಾಣದಲ್ಲಿ ಕಾರ್ಯಾಚರಣೆಗೊಳಿಸುವುದು.
2. ಮೈಸೂರು ನಗರ ಸಾರಿಗೆ ವಿಭಾಗದ ಬನ್ನಿಮಂಟಪ ಘಟಕವನ್ನು ಮತ್ತು ಮೈಸೂರು ಗ್ರಾಮಾಂತರ ವಿಭಾಗದ ಘಟಕ–2ನ್ನು ಮುಚ್ಚುವುದು.
3. ಘಟಕ ಮತ್ತು ವಿಭಾಗಗಳ ವಿಲೀನದಿಂದಾಗಿ ಹೆಚ್ಚುವರಿ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಾಲ್ಕೂ ನಿಗಮಗಳಲ್ಲಿ ಖಾಲಿ ಇರುವ ಸ್ಥಳಗಳಿಗೆ ನಿಯಮಾನುಸಾರ ವರ್ಗಾಯಿಸುವುದು.
4. ಮೈಸೂರು ನಗರ ಸಾರಿಗೆ ವಿಭಾಗ ಮತ್ತು ಮೈಸೂರು ಗ್ರಾಮಾಂತರ ವಿಭಾಗಗಳ ವಿಲೀನದಿಂದ ಬನ್ನಿಮಂಟಪ ಘಟಕ, ಮೈಸೂರು ಗ್ರಾಮಾಂತರ ಘಟಕ–2, ಮೈಸೂರು ನಗರ ಸಾರಿಗೆ ವಿಭಾಗ ಕಛೇರಿ ಹಾಗೂ ವಿಭಾಗೀಯ ಕಾರ್ಯಾಗಾರವನ್ನು ಮುಚ್ಚುವುದರಿಂದ ತೆರವಾಗುವ ಸ್ಥಳಗಳನ್ನು ವಾಣಿಜ್ಯ ಉದ್ದೇಶಗಳಿಗೆ ಉಪಯೋಗಿಸುವುದು.

ವಿಭಾಗಗಳ ವಿಲೀನಕ್ಕೆ ಅಗತ್ಯವಿರುವ ವಿಧಿ–ವಿಧಾನಗಳನ್ನು ಕೈಗೊಳ್ಳಲು, ಅಧಿಕಾರಿ/ಸಿಬ್ಬಂದಿಗಳ ಮಂಜೂರಾತಿ ಆದೇಶ/ನಿಯೋಜನೆ, ಸ್ಥಿರಾಸ್ತಿ/ಚರಾಸ್ತಿಗಳ ವರ್ಗಾವಣೆ, ಅನುಸೂಚಿಗಳ ಪರಿಷ್ಕರಣೆ/ಕಡಿತ/ವರ್ಗಾವಣೆ, ಮುಂತಾದವುಗಳ ಬಗ್ಗೆ ಸಂಬಂಧಿಸಿದ ಇಲಾಖಾ ಮುಖ್ಯಸ್ಥರು ದಿನಾಂಕ:01.03.2022ರೊಳಗಾಗಿ ಅಗತ್ಯ ಕ್ರಮ ಕೈಗೊಳ್ಳುವುದು.

ಸಂಬಂಧಪಟ್ಟವರೆಲ್ಲರೂ ಮೇಲಿನ ಆದೇಶಗಳನ್ನು ಮನದಟ್ಟು ಮಾಡಿಕೊಂಡು ಕ್ರಮ ಕೈಗೊಳ್ಳತಕ್ಕದ್ದು.

(ಶಿವಯೋಗಿ ಸಿ. ಕಳಸದ, ಭಾ.ಆ.ಸೇ.,)
ವ್ಯವಸ್ಥಾಪಕ ನಿರ್ದೇಶಕರು

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಕಕರಸಾ ನಿಗಮ ರವರಿಗೆ.
3. ನಿರ್ದೇಶಕರು (ಸಿಬ್ಬಂದಿ:ಜಾಗೃತ), ಕರಾರಸಾ ನಿಗಮ, ರವರಿಗೆ.

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ವಿಭಾಗೀಯ ಮುಖ್ಯಸ್ಥರುಗಳು, ಕರಾರಸಾ ನಿಗಮ ರವರುಗಳಿಗೆ.
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾಸಂಸ್ಥೆ/ವಾಕರಸಾ ಸಂಸ್ಥೆ/ಕಕರಸಾ ನಿಗಮ ರವರಿಗೆ.
6. ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರವರಿಗೆ ವರದಿ ಸಲ್ಲಿಸುವುದು.
7. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
8. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ)/(ನೇಮಕ), ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
9. ಪ್ರಧಾನ ಕಛೇರಿ ಪತ್ರ ಕಡತ.